<u>1ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ</u>
<u>ಬೆಂಗಳೂರು ನಗರ</u>

ಸಿ.ಸಿ. ನಂ. 31072-2018

ಸಿಡಬ್ಲೂ -12 ಪಿಡಬ್ಲೂ-3

| | | |
|---|---|---|
| ಸಾಕ್ಷಿದಾರರ ಹೆಸರು | : | ಕೆ. ಎನ್ ಸುಧಾಕರ |
| ತಂದೆಯ ಹೆಸರು | : | ನಾರಾಯಣಸ್ವಾಮಿ |
| ವಯಸ್ಸು | : | 46 ವರ್ಷ |
| ಕೆಲಸ | : | ಪಿಐ, ಕರ್ನಾಟಕ ಲೋಕಾಯುಕ್ತ, ಚಾಮರಾಜನಗರ |
| ವಾಸ | : | ಮೈಸೂರು |

<u>ಸಾಕ್ಷಿಯನ್ನು ದಿನಾಂಕಃ 15-06-2026 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.</u>
<u>ಮುಖ್ಯ ವಿಚಾರಣೆ ಹಿ.ಸ.ಸಾ.ಅ. ರವರಿಂದಃ</u>

ನಾನು ದಿ. 30-07-2017 ರಿಂದ ದಿ. 12-12-2018 ರವರೆಗೆ ವೈಯಾಲಿಕಾವಲ್ ಪೊಲೀಸ್ ಠಾಣೆಯಲ್ಲಿ ಪಿಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಕೇಸಿನ ಕಡತವನ್ನು ಚಾಸಾ 11 ರವರಿಂದ ಪಡೆದು ತನಿಖೆಯನ್ನು ಮುಂದುವರಿಸಿರುತ್ತೇನೆ.

ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮದಲ್ಲಿ ಕೃತ್ಯ ನಡೆದ ಸ್ಥಳದಲ್ಲಿ ಪಂಚನಾಮೆಯನ್ನು ಮಾಡಿರುತ್ತೇನೆ. ಸಾಕ್ಷಿಯು ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 4 ಎಂದು ಸಾಕ್ಷಿಯ ಸಹಿಯನ್ನು ನಿಪಿ. 4 ಎ ಎಂದು ಗುರುತಿಸಲಾಯಿತು. ಚಾಸಾ 1 ರವರ ಮುಂದುವರಿದ ಹೇಳಿಕೆಯನ್ನು ಪಡೆದಿರುತ್ತೇನೆ. ಆ ಸಮಯದಲ್ಲಿ ಕಳುವು ಮಾಲಿನ ರಶೀದಿಯನ್ನು ಪಡೆದು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು 12 ರಶೀದಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 5 ಎಂದು ಗುರುತಿಸಲಾಯಿತು.

ಆರೋಪಿಯ ಪತ್ತೆಗಾಗಿ ನೇಮಿಸಲಾಗಿದ್ದ ಸಿಬ್ಬಂದಿಗಳು ದಿ. 23-08-2015 ರಂದು ನನ್ನ ಸಮಕ್ಷಮ ವರದಿಯೊಂದಿಗೆ ಹಾಜರುಪಡಿಸಿರುತ್ತಾರೆ. ಸಾಕ್ಷಿಯು ಸದರಿ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ. 1 ಎಂದು ಗುರುತಿಸಲಾಗಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ. 1 ಬಿ ಎಂದು

ಗುರುತಿಸಲಾಯಿತು. ನಂತರ ಆರೋಪಿಯ ವಿರುದ್ಧ ದಸ್ತಗಿರಿ ಕ್ರಮ ಅನುಸರಿಸಿ ಆತನ ಸ್ವಇಚ್ಛಾ ಹೇಳಿಕೆಯನ್ನು ಪಡೆದಿರುತ್ತೇನೆ.

ಮರುದಿನ ಚಾಸಾ 4 ರವರ ಮನೆಯ ಬಳಿ ಆರೋಪಿಯನ್ನು ಕರೆದುಕೊಂಡು ಹೋಗಿರುತ್ತೇವೆ. ಚಾಸಾ 4 ರವರ ಮನೆಯಲ್ಲಿ ನಕಲಿ ಕೀಯನ್ನು ಕೃತ್ಯಕ್ಕೆ ಉಪಯೋಗಿಸಿ ಇಟ್ಟಿರುವುದಾಗಿ ನುಡಿದ ಮೇರೆಗೆ ಚಾಸಾ 5 ಮತ್ತು 6 ರವರ ಸಮಕ್ಷಮ ಕಳುವು ಗೋಡಂಬಿ ಬಾಕ್ಸ ಗಳನ್ನು ಪಂಚನಾಮೆಯ ಮೂಲಕ ಅಮಾನತ್ತು ಪಡಿರಿಸಿಕೊಂಡಿರುತ್ತೇನೆ. ಸಾಕ್ಷಿಯು ಅಮಾನತ್ತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 6 ಎಂದು ಸಾಕ್ಷಿಯ ಸಹಿಯನ್ನು ನಿಪಿ. 6 ಎ ಎಂದು ಗುರುತಿಸಲಾಯಿತು. ಮಾಲು ಅಮಾನತ್ತು ಪಡಿಸಿಕೊಂಡ ಬಗ್ಗೆ ಠಾಣಾ ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಯು  ಕಳುವು ಮಾಲುಗಳ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ. 7 ಮತ್ತು 8 ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ 4 ರವರ ಹೇಳಿಕೆಯನ್ನು ಮತ್ತು ಚಾಸಾ 1 ರವರ ಮುಂದುವರಿದ ಹೇಳಿಕೆಯನ್ನು ಪಡೆದಿರುತ್ತೇನೆ. ಅಮಾನತ್ತು ಪಡಿಸಿಕೊಂಡ ಕೀಯನ್ನು ನೋಡಿದರೆ ಗುರುತಿಸುತ್ತೇನೆ.

ಚಾಸಾ 1 ರವರು ಮಾಲನ್ನು ನೋಡಿ ಗುರುತಿಸಿದ ಬಗ್ಗೆ  ಅವರ ಮರುಹೇಳಿಕೆಯನ್ನು ಮತ್ತು ಚಾಸಾ 4 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಮಾಲುಗಳನ್ನು ಚಾಸಾ 1 ರವರ ವಶಕ್ಕೆ ನೀಡಿರುತ್ತೇನೆ. ಸಾಕ್ಷಿಯು ಮಾಲು ಬಿಡುಗಡೆ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 9 ಎಂದು ಸಾಕ್ಷಿಯ ಸಹಿಯನ್ನು ನಿಪಿ. 9 ಎ ಎಂದು ಗುರುತಿಸಲಾಯಿತು. ಸಾಕ್ಷಿಯು ನಷ್ಟಭರ್ತಿ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 10 ಎಂದು ಸಾಕ್ಷಿಯ ಸಹಿಯನ್ನು ನಿಪಿ. 10 ಎ ಎದು ಗುರುತಿಸಲಾಯಿತು.

ನಂತರ ತನಿಖೆ ಪೂರ್ಣಗೊಂಡಿದ್ದರಿಂದ ದಿ. 11-09-2018 ರಂದು ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತೇನೆ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ

ಆರೋಪಿಯು ನನ್ನ ಸಮಕ್ಷಮ ಯಾವುದೇ ಸ್ವಇಚ್ಛಾ ಹೇಳಿಕೆಯನ್ನು ನೀಡಿಲ್ಲ ಎಂದರೆ ಸರಿಯಲ್ಲ. ನಿಪಿ. 7 ಮತ್ತು 8 ರಲ್ಲಿ ಕಂಡು ಬಂದಿರುವ ಮುದ್ದೆ ಮಾಲುಗಳು ಆರೋಪಿಗೆ ಸಂಬಂಧಿಸಿದವು ಅಲ್ಲಾ ಎಂದರೆ ಸರಿಯಲ್ಲ. ನಿಪಿ. 6 ರ ಸಮಯದಲ್ಲಿ ಯಾವುದೇ ಭಾವಚಿತ್ರಗಳನ್ನು ತೆಗೆದಿಲ್ಲ ಎಂದರೆ ಸರಿ. ಆ ರೀತಿಯಾಗಿ ಭಾವಚಿತ್ರವನ್ನು ತೆಗೆಯಲು ಯಾವುದೇ ತೊಂದರೆ ಇರಲಿಲ್ಲ ಎಂದರೆ ಸರಿಯಲ್ಲ. ಚಾಸಾ 1 ರವರು ಆರೋಪಿಯ ಮೇಲಿನ ವೈಯಕ್ತಿಕ ದ್ವೇಷದಿಂದ ಸುಳ್ಳು ದೂರನ್ನು ನೀಡಿ ಅದಕ್ಕೆ ಪೂರಕವಾಗಿ ಸುಳ್ಳು ದೋಷಾರೋಪಣ ಪತ್ರವನ್ನು ಸಲ್ಲಿಸಿ, ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು. ಸಾಕ್ಷಿಯ ಎದುರಿನಲ್ಲಿ ಓದಿ ಹೇಳಿದ ಮೇಲೆ ಸರಿ ಇದೆ ಎಂದು ಒಪ್ಪಿ ಸಹಿ ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಅ. ಮು. ನ್ಯಾ.ದಂ. ನ್ಯಾ